## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅ.ದೇವೇಗೌಡ ರವರು ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ

ವಿಷಯ: ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಕನಸಿನ ಬೆಂಗಳೂರು ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರವಾಗಿದ್ದು, ಕೆಂಪೇಗೌಡರು ನಾಲ್ಕು ದಿಕ್ಕುಗಳಲ್ಲಿ ನಿರ್ಮಿಸಿದ್ದ ಗಡಿ ಗೋಪುರಗಳನ್ನು ಮೀರಿ 198 ವಾರ್ಡ್‌ಗಳಿದ್ದ ಪಾಲಿಕೆ ಈಗ 243 ವಾರ್ಡ್‌ಗಳಾಗಿ ಪರಿವರ್ತನೆಗೊಂಡು, ವಿವಿಧ ದಂಧೆಗಳಿಂದಾಗಿ ಶಾಲಾ ಮತ್ತು ಕಾಲೇಜು ಮಕ್ಕಳು, ಉದ್ಯೋಗಸ್ಥರು, ಸಿರಿವಂತರು ಮಾದಕವ್ಯಸನಕ್ಕೆ ತುತ್ತಾಗಿ ಅವರ ಮುಂದಿನ ಭವಿಷ್ಯವನ್ನು ಹಾಳು ಮಾಡಿಕೊಳ್ಳುವುದರ ಜೊತೆಗೆ ಪ್ರತಿಷ್ಠಿತ ಬೆಂಗಳೂರು ಮಹಾನಗರದ ಹೆಸರನ್ನು ಹಾಳು ಮಾಡುತ್ತಿದ್ದು, ಈ ದಂಧೆಗಳನ್ನು ಸಂಪೂರ್ಣವಾಗಿ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಸನ್ಮಾನ್ಯ ಗೃಹ ಮಂತ್ರಿಗಳವರ ಗಮನ ಸೆಳೆಯಬಯಸುತ್ತೇನೆ.

ಉತ್ತರ:

ಬೆಂಗಳೂರು ನಗರ ಪೊಲೀಸ್ ಶಾಖಾ ವ್ಯಾಪ್ತಿಯಲ್ಲಿ ಡ್ರಗ್ಸ್ ಜಾಲವನ್ನು ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ, ಮಾದಕ ವಸ್ತುಗಳನ್ನು ಮಾರಾಟ ಮಾಡುವವರ ಮತ್ತು ಸೇವನೆ ಮಾಡುವವರ ಕುರಿತು ಮಾಹಿತಿ ಸಂಗ್ರಹಿಸಿ, ಸದರಿಯವರುಗಳ ವಿರುದ್ಧ ದಾಳಿ ನಡೆಸಿ ಪ್ರಕರಣಗಳನ್ನು ದಾಖಲಿಸಲಾಗಿದ್ದು, ಡ್ರಗ್ಸ್ ಜಾಲವನ್ನು ತಡೆಗಟ್ಟಲು ಈ ಕೆಳಗಿನಂತೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

- ಟೋಲ್ ಫ್ರೀ ಸಂಖ್ಯೆ. 1908 ದೂರವಾಣಿಯ ಮುಖಾಂತರ ಸಾರ್ವಜನಿಕರು ದೂರು ಮತ್ತು ಮಾಹಿತಿ ನೀಡುವ ಯೋಜನೆ ಪ್ರಾರಂಭಿಸಲಾಗಿದೆ.

- ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿವರವಾಗಿ ತಿಳುವಳಿಕೆ ನೀಡಲಾಗುತ್ತಿದೆ. ಶಾಲಾ ಕಾಲೇಜುಗಳ ಹತ್ತಿರ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಹಾಗೂ ಅಲ್ಲಿಯೇ ಸಾರ್ವಜನಿಕವಾಗಿ ಮಾದಕ ವಸ್ತು ಸೇವನೆ ಮಾಡುವವರ ವಿರುದ್ಧ ಸೂಕ್ತ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುತ್ತಿದೆ.

- ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್. ಪ್ರಕರಣಗಳಲ್ಲಿ ಭಾಗಿಯಾದ ಆರೋಪಿತರಿಗೆ **PIT-NDPS ಕಾಯ್ದೆ** ಅಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ 8 ಪ್ರಕರಣಗಳನ್ನು ದಾಖಲಿಸಿ ಕ್ರಮ ಜರುಗಿಸಲಾಗಿರುತ್ತದೆ.

- ಸಾರ್ವಜನಿಕ ಸ್ಥಳಗಳು ಹಾಗೂ ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

- ನಗರಕ್ಕೆ ಮಾದಕ ವಸ್ತುಗಳು(ಗಾಂಜಾ) ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ.

- ಡಿಜಿಟಲ್ ಕರೆನ್ಸಿ ಡಾರ್ಕ್‌ನೆಟ್ (Darknet) ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಪತ್ತೆ ಮಾಡಿ ಹಾಗೂ ವಿದೇಶಗಳಿಂದ ಪೋಸ್ಟಲ್/ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಿ ಆರೋಪಿಗಳನ್ನು ದಸ್ತಗಿರಿ ಮಾಡಲಾಗಿದೆ.

- ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಜೊತೆಗೆ ಸಮನ್ವಯ ಸಭೆಯನ್ನು ನಡೆಸಲಾಗಿದೆ.

- ನಗರದಲ್ಲಿ ಪ್ರತಿಷ್ಠಿತ ಹೋಟೆಲ್, ಪಬ್‌ಗಳಲ್ಲಿ ರಾತ್ರಿ ಪಾರ್ಟಿಗಳನ್ನು ನಡೆಸಿ ಅಲ್ಲಿಗೆ ಬರುತ್ತಿದ್ದ ಪ್ರತಿಷ್ಠಿತರಿಗೆ ಹಾಗೂ ಸೆಲೆಬ್ರಿಟಿಗಳಿಗೆ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ ವ್ಯವಸ್ಥಿತ ಜಾಲವನ್ನು ಪತ್ತೆ ಮಾಡಿ ಆರೋಪಿಗಳನ್ನು ದಸ್ತಗಿರಿ ಮಾಡಲಾಗಿದೆ.

- ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ವಿಶೇಷವಾಗಿ ವಿದೇಶಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿದೆ ಎಂಬ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನು ಕ್ರಮಕೈಗೊಳ್ಳಲಾಗುತ್ತಿದೆ. ವಿದೇಶಿಯರ ವಾಸದ ಬಗ್ಗೆ ಮಾಹಿತಿಯನ್ನು ಒದಗಿಸುವಂತೆ ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

- ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ, ಸೇವಿಸುವವರ ಕುರಿತು ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ, ಠಾಣಾ ಮಟ್ಟದಲ್ಲಿ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ ಹಾಗೂ ಸೂಕ್ತ ನಿಗಾವಹಿಸಿ ಮಾದಕ ದ್ರವ್ಯಗಳ ಮಾರಾಟ ಮತ್ತು ಮಾಹಿತಿ ಸಂಗ್ರಹಿಸಲಾಗುತ್ತಿರುತ್ತದೆ. ಈ ಬಗ್ಗೆ ಬಾತ್ಮಿದಾರರಿಗೂ ಸಹ ಮಾಹಿತಿಯನ್ನು ನೀಡುವಂತೆ ಸೂಚಿಸಲಾಗಿದೆ.

- ಬಾರ್ ಮತ್ತು ರೆಸ್ಟೋರೆಂಟ್, ಕಾಫಿ–ಡೇ, ಪಬ್, ಡಾನ್ಸ್‌ಬಾರ್, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಹೆಚ್ಚಾಗಿ ಯುವಕರು ಸೇರುವ ಸ್ಥಳಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ. ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ ಜೊತೆಗೆ ಕಿರುಚಿತ್ರಗಳ ಮೂಲಕ ಅರಿವು ಮೂಡಿಸುವ ಕಾರ್ಯ ಮಾಡಲಾಗುತ್ತಿದೆ.

- ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ, ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು, ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ದೂರವಿಡುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.

- ಮಾದಕ ವಸ್ತುಗಳನ್ನು ಬೆಳೆಯುವ ಪ್ರದೇಶ ಮತ್ತು ತಯಾರಿಸುವ ಲ್ಯಾಬ್‌ಗಳ ಮೇಲ ದಾಳಿ ಮಾಡಿ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ.

ಒಇ 36 ಪಿಎನ್‌ಡಿ 2022(ಇ)

(ಆರಗ ಜ್ಞಾನೇಂದ್ರ)
ಗೃಹ ಸಚಿವರು

C-60